RNU AIR DHARWAD

# FEBRUARY 18, 2026
# ALL INDIA RADIO- DHARWAD
# PRADESH SAMACHARA (KANNADA) 7:05 AM

## ಮುಖ್ಯಾಂಶಗಳು

- **ರೈತ ಸಂಘಟನೆಗಳ ಮುಖಂಡರ** ಜೊತೆ ಮುಖ್ಯಮಂತ್ರಿ ಬಜೆಟ್ ಪೂರ್ವಭಾವಿ ಸಭೆ: ಬೇಡಿಕೆಗಳ ಕುರಿತು ಸಕಾರಾತ್ಮಕ ಸ್ಪಂದನೆ.

- **ಫೆಬ್ರವರಿ 28 ರಿಂದ ಮಾರ್ಚ್ 17 ರವರೆಗೆ** ದ್ವಿತೀಯ ಪಿಯುಸಿ ಪರೀಕ್ಷೆ: ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಶಾಲಾ ಶಿಕ್ಷಣ ಸಚಿವರ ಸೂಚನೆ.

- **ರಾಜ್ಯದಲ್ಲಿ ಖಾಲಿ ಇರುವ** ಶಿಕ್ಷಕರ ಹುದ್ದೆ ಶೀಘ್ರ ಭರ್ತಿಗೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಆಗ್ರಹ.

- **ರಾಜ್ಯದ ಜನರ ಸ್ವಾಭಿಮಾನಿ** ಬದುಕು ಸಾಧ್ಯವಾಗಿಸಿದ ಪಂಚ ಗ್ಯಾರಂಟಿ ಯೋಜನೆಗಳು– ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ಅಭಿಮತ.

## ಈಗ ವಾರ್ತೆಗಳ ವಿವರ

*******

**ರೈತ ಸಂಘಟನೆಗಳ ಮುಖಂಡರು** ಮತ್ತು ಕೃಷಿ ಸಂಸ್ಥೆಗಳ ಪ್ರತಿನಿಧಿಗಳ ಜೊತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ 2026–27 ನೇ ಸಾಲಿನ ಆಯವ್ಯಯ ಪೂರ್ವಭಾವಿ ಸಭೆ ನಡೆಸಿದರು. ಈ ಕುರಿತು ಸಾಮಾಜಿಕ ಮಾಧ್ಯಮ ಎಕ್ಸ್ ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಸಭೆಯಲ್ಲಿ ರೈತ ಸಂಘಟನೆಗಳ ಮುಖಂಡರು ಹಲವು ಬೇಡಿಕೆ, ಮತ್ತು ಮನವಿಗಳನ್ನು ಸಲ್ಲಿಸಿದ್ದು, ರೈತರ ಬೇಡಿಕೆಗಳಿಗೆ ಸರ್ಕಾರ ಸಕಾರಾತ್ಮಕವಾಗಿ ಸ್ಪಂದಿಸಲಿದೆ. ಬಜೆಟ್‌ನಲ್ಲಿ ಸಾಧ್ಯವಾಗುವ ಎಲ್ಲ ಬೇಡಿಕೆಗಳನ್ನು

ಈಡೇರಿಸುವುದಾಗಿ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಸಚಿವರಾದ ಚಲುವರಾಯಸ್ವಾಮಿ, ವೆಂಕಟೇಶ್, ನೀತಿ ಆಯೋಗದ ಉಪಾಧ್ಯಕ್ಷ ಬಿ.ಆರ್.ಪಾಟೀಲ್, ಸರ್ಕಾರದ ಮುಖ್ಯಕಾರ್ಯದರ್ಶಿ ಡಾ॥ ಶಾಲಿನಿ ರಜನೀಶ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

*******

**ಫೆಬ್ರವರಿ 28 ರಿಂದ ಮಾರ್ಚ್ 17 ರವರೆಗೆ** ನಡೆಯಲಿರುವ ದ್ವಿತೀಯ ಪಿಯುಸಿ ಪರೀಕ್ಷೆಗೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಮಧು ಬಂಗಾರಪ್ಪ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿದ ಅವರು, ಪಿಯುಸಿ ಪರೀಕ್ಷೆಗಳು ಶಾಂತಿಯುತವಾಗಿ ನಡೆಯುವಂತೆ ಸಕಲ ಸಿದ್ದತೆ ಮಾಡಿಕೊಳ್ಳಬೇಕು. ಯಾವುದೇ ಗೊಂದಲ ಮತ್ತು ಭಯಕ್ಕೀಡಾಗದಂತೆ ನಿರಾತಂಕವಾಗಿ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ವ್ಯವಸ್ಥೆಗಳನ್ನು ಮಾಡಿಕೊಡಬೇಕು ಎಂದರು. ಪರೀಕ್ಷಾ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು. ಸಿಸಿ ಟಿವಿ, ವೆಬ್ ಕ್ಯಾಸ್ಟಿಂಗ್ ವ್ಯವಸ್ಥೆ ಅಳವಡಿಸಬೇಕು. ದೂರದಿಂದ ಬರುವ ವಿದ್ಯಾರ್ಥಿಗಳಿಗೆ ಸಮರ್ಪಕ ಸಾರಿಗೆ ವ್ಯವಸ್ಥೆ ಮಾಡುವಂತೆ ಸಚಿವರು ಸೂಚನೆ ನೀಡಿದರು.

*******

**ರಾಜ್ಯದಲ್ಲಿ 29 ಸಾವಿರಕ್ಕೂ** ಅಧಿಕ ಶಿಕ್ಷಕರ ಹುದ್ದೆ ಖಾಲಿ ಇದ್ದು, ಶೀಘ್ರದಲ್ಲೇ ಹುದ್ದೆ ಭರ್ತಿ ಮಾಡುವಂತೆ ಸರ್ಕಾರಕ್ಕೆ ವಿಧಾನ ಪರಿ ‘ತ್ ಸಭಾಪತಿ ಬಸವರಾಜ ಹೊರಟ್ಟಿ ಆಗ್ರಹಿಸಿದ್ದಾರೆ. ಹಾವೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಿಕ್ಷಕರ ಹುದ್ದೆ ಭರ್ತಿ ಕುರಿತು ಶಿಕ್ಷಣ ಸಚಿವರು ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಸಭೆ ನಡೆಸಿ ಚರ್ಚಿಸಲಾಗುವುದು ಎಂದರು.

**ಧ್ವನಿ–ಬಸವರಾಜ ಹೊರಟ್ಟಿ– ಸೆಕೆಂಡ್ಸ್**

*******

**ಮಹಿಳೆ ಮತ್ತು ಮಕ್ಕಳ** ಮೇಲಿನ ದೌರ್ಜನ್ಯಗಳನ್ನು ತಡೆಯುವ ಉದ್ದೇಶದಿಂದ ಅಕ್ಕ ಪಡೆ ರಚಿಸಲಾಗಿದ್ದು, ರಾಜ್ಯದ ಬೆಳಗಾವಿ ಸೇರಿದಂತೆ 31 ಜಿಲ್ಲೆ ಮತ್ತು ಮತ್ತು 5 ಆಯುಕ್ತರ ವಲಯದಲ್ಲಿ ಅಕ್ಕಪಡೆಗೆ ವಿದ್ಯುಕ್ತವಾಗಿ ಚಾಲನೆ

ನೀಡಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ. ಬೆಳಗಾವಿಯ ರಾಣಿ ಚನಮ್ಮ ವೃತ್ತದಲ್ಲಿ ಅಕ್ಕಪಡೆಗೆ ಚಾಲನೆ ನೀಡಿ ಮಾತನಾಡಿದ ಅವರು, ತೊಂದರೆಗೆ ಒಳಗಾದ ಮಹಿಳೆ ಮತ್ತು ಮಕ್ಕಳು ನೇರವಾಗಿ ಸಹಾಯವಾಣಿ ಮೂಲಕ ಸಂಪರ್ಕಿಸಿದರೆ ತ್ವರಿತವಾಗಿ ಪಡೆ ಸುರಕ್ಷತೆಗೆ ಮುಂದಾಗುತ್ತದೆ ಎಂದರು. ಅಕ್ಕ ಪಡೆಗೆ ಸದ್ಯ 300 ಸಿಬ್ಬಂದಿ ನಿಯೋಜಿಸಲಾಗಿದ್ದು, ಅಕ್ಕ ಪಡೆ ಹೆಚ್ಚು ಭರವಸೆ ಮೂಡಿಸಿದ್ದರಿಂದ ರಾಜ್ಯದ ಪ್ರತಿಯೊಂದೂ ತಾಲೂಕಿನಲ್ಲಿಯೂ ಈ ಪಡೆಯ ನಿರ್ಮಿತಿ ಬಗ್ಗೆ ಪ್ರಸ್ತುತ ಮುಂಗಡ ಪತ್ರದಲ್ಲಿ ಮುಖ್ಯಮಂತ್ರಿ ಘೋಷಿಸುವ ನಿರೀಕ್ಷೆಯಿದೆ ಎಂದು ಸಚಿವರು ಹೇಳಿದರು.

*******

**ಮಂಗಳೂರು ಸೇರಿದಂತೆ** ಕರಾವಳಿಯಲ್ಲಿ ಶಾಂತಿ ಸುವ್ಯವಸ್ಥೆ ನೆಲೆಯೂರಿದ್ದು, ಕರಾವಳಿಯಲ್ಲಿ ಅಭಿವೃದ್ಧಿಗೆ ಪೂರಕ ವಾತಾವರಣ ನಿರ್ಮಾಣವಾಗಿದೆ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ಮಂಗಳೂರಿನಲ್ಲಿ ಪೊಲೀಸ್ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಡ್ರಗ್ಸ್ ಮಾಫಿಯಾಕ್ಕೆ ಕಡಿವಾಣ ಬಿದ್ದಿದೆ. ದ್ವೇ ಭಾವನೆಯಿಂದ ನಡೆಯುತ್ತಿದ್ದ ಕೊಲೆಯಂತಹ ಅಹಿತಕರ ಘಟನೆಗಳು ಕಡಿಮೆಯಾಗಿದ್ದು, ಜನತೆ ನೆಮ್ಮದಿಯಿಂದ ಬದುಕುವ ವಾತಾವರಣ ನಿರ್ಮಾಣವಾಗಿದೆ ಎಂದರು. ಈ ಹಿಂದೆ ಮಂಗಳೂರಿಗೆ ಬಂದಾಗ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಿಕೊಳ್ಳುವಂತೆ ಪೊಲೀಸ್ ಅಧಿಕಾರಿಗಳಿಗೆ ಸ್ಪ ಟ ಸೂಚನೆ ನೀಡಲಾಗಿತ್ತು. ಪೊಲೀಸರು ಕೂಡ ಮುತುವರ್ಜಿ ವಹಿಸಿ ಸೂಕ್ತ ಕ್ರಮ ತೆಗೆದುಕೊಂಡಿದ್ದಾರೆ. ಇದರಿಂದಾಗಿ ಮಾದಕ ದ್ರವ್ಯ ಜಾಲಕ್ಕೆ ಕಡಿವಾಣ ಬಿದ್ದಿದೆ ಎಂದು ಸಚಿವರು ಹೇಳಿದರು.

*******

**ರಾಜ್ಯ ಸರ್ಕಾರ ಜಾರಿಗೊಳಿಸಿರುವ** ಪಂಚ ಗ್ಯಾರಂಟಿ ಯೋಜನೆಗಳಿಂದಾಗಿ ರಾಜ್ಯದ ಜನ ಸ್ವಾಭಿಮಾನದಿಂದ ಬದುಕಲು ಸಾಧ್ಯವಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ಹೇಳಿದ್ದಾರೆ. ಕೊಪ್ಪಳದಲ್ಲಿ ಆಯೋಜಿಸಿದ್ದ ಪಂಚ ಗ್ಯಾರಂಟಿ ಯೋಜನೆಗಳ ಅನು ೃನ ಕುರಿತ ಕಾರ್ಯಾಗಾರ ಮತ್ತು ಗ್ಯಾರಂಟಿ ಉತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳ ಹಣ ಉಳಿತಾಯ ಮಾಡಿ ಮಹಿಳೆಯರು ಕಿರಾಣಿ, ಅಂಗಡಿ, ವ್ಯಾಪಾರ, ಹಸುಗಳ ಸಾಕಣೆ ಜೊತೆಗೆ ತಮ್ಮ ಮಕ್ಕಳ ಶಾಲೆಯ ಶುಲ್ಕ ಕಟ್ಟುವ ಮೂಲಕ ಮಹಿಳಾ ಸಬಲೀಕರಣದ ದಿಶೆಯಲ್ಲಿ ದಿಟ್ಟ ಹೆಜ್ಜೆ ಇಡಲಾಗಿದೆ ಎಂದರು. ರಸ್ತೆ, ಕೆರೆ ಕಟ್ಟೆಗಳು

ಅಭಿವೃದ್ಧಿಯಾದರೆ ಸಾಲದು. ಪ್ರತಿಯೊಬ್ಬರು ಅಭಿವೃದ್ಧಿಯಾಗಬೇಕು ಎನ್ನುವ ಕಾರಣಕ್ಕಾಗಿ ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ ಎಂದು ಸಚಿವರು ಹೇಳಿದರು.

*******

**ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..**

**ಪ್ರಕಟಣೆ–42 ಸೆಕೆಂಡ್ಸ್**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

*******

**ಪ್ರಸಕ್ತ ಶಿಕ್ಷಣ ಪದ್ಧತಿ ಉದ್ಯೋಗ** ಮುಖಿಯಾಗಿದೆಯೇ ವಿನಃ ಜ್ಞಾನ ಮುಖಿಯಾಗಿಲ್ಲ ಎಂದು ಹಿರಿಯ ಸಾಹಿತಿ ಬರಗೂರು ರಾಮಚಂದ್ರಪ್ಪ ಕಳವಳ ವ್ಯಕ್ತಪಡಿಸಿದ್ದಾರೆ. 34 ನೇ ನುಡಿ ಹಬ್ಬದ ಪ್ರಯುಕ್ತ ಹಂಪಿ ಕನ್ನಡ ವಿಶ್ವವಿದ್ಯಾಲಯದಲ್ಲಿ ನಡೆದ ಪುಸ್ತಕಗಳ ಲೋಕಾರ್ಪಣೆ ಕಾರ್ಯಕ್ರಮಲ್ಲಿ ಮಾತನಾಡಿದ ಅವರು, ಜಾಗತಿಕ ಜ್ಞಾನವನ್ನು ಕನ್ನಡದ ಮುಖಾಂತರ ಜನರಿಗೆ ತಲುಪಿಸುವ ಉದ್ದೇಶದಿಂದ ಕನ್ನಡ ವಿಶ್ವವಿದ್ಯಾಲಯ, ತನ್ನ ಪ್ರಸಾರಾಂಗದ ಮೂಲಕ ಇದುವರೆಗೆ 1,753 ಪುಸ್ತಕಗಳನ್ನು ಬಿಡುಗಡೆಗೊಳಿಸಿರುವ ಕಾರ್ಯ ಶ್ಲಾಘನೀಯ ಎಂದರು.

**ಧ್ವನಿ–ಬರಗೂರು ರಾಮಚಂದ್ರಪ್ಪ–44 ಸೆಕೆಂಡ್ಸ್**

*******

**2026–27ನೇ ಸಾಲಿನ** ರಾಜ್ಯ ಬಜೆಟ್‌ನಲ್ಲಿ ಉತ್ತರ ಕರ್ನಾಟಕ ಹಾಗೂ ಹುಬ್ಬಳ್ಳಿ ಧಾರವಾಡ ನಗರದ ಸಮಗ್ರ ಅಭಿವೃದ್ಧಿಗೆ ಪೂರಕ ಯೋಜನೆಗಳನ್ನು ಘೋಷಿಸುವಂತೆ ಹುಬ್ಬಳ್ಳಿ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಜಿ. ಕೆ. ಆದಪ್ಪಗೌಡರ ಮುಖ್ಯಮಂತ್ರಿ ಅವರಿಗೆ ಮನವಿ ಮಾಡಿದ್ದಾರೆ. ಬೆಂಗಳೂರಿನಲ್ಲಿ ನಡೆದ ಬಜೆಟ್ ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಂಡು, ವ್ಯಾಪಾರ–ವಾಣಿಜ್ಯೋದ್ಯಮಕ್ಕೆ ಪ್ರೋತ್ಸಾಹ, ಬಾಕಿ ಇರುವ ಪ್ರಮುಖ ರೈಲ್ವೆ ಯೋಜನೆಗಳಿಗೆ ರಾಜ್ಯ ಸರ್ಕಾರದ ಸಹಕಾರ, ಎಪಿಎಂಸಿಗೆ ಸಂಬಂಧಿಸಿದ ಪ್ರಸ್ತಾವನೆಗಳು, ಬೆಂಗಳೂರು ಇಲೆಕ್ಟ್ರಾನಿಕ್ ಸಿಟಿ ಮಾದರಿಯಲ್ಲಿ ಮ್ಯಾನ್ಯುಫ್ಯಾಕ್ಚರಿಂಗ್ ಸಿಟಿ ಸ್ಥಾಪನೆ, ಪ್ರವಾಸೋದ್ಯಮ ಅಭಿವೃದ್ಧಿಗೆ ಉತ್ತರ ಕರ್ನಾಟಕಕ್ಕೆ ವಿಶೇ ` ಪ್ಯಾಕೇಜ್ ಘೋಷಿಸುವಂತೆ ಮನವಿ ಸಲ್ಲಿಸಿದರು.

*******

**ವಂದೇ ಮಾತರಂ 150 ನೇ ವಾರ್ಷಿಕೋತ್ಸವದ** ಅಂಗವಾಗಿ ಆಯೋಜಿಸಲಾಗಿರುವ 'ಸಿಐಎಎಸ್‌ಎಫ್ ವಂದೇ ಮಾತರಂ ಕೋಸ್ಟಲ್ ಸೈಕ್ಲೋಥಾನ್' ಇಂದು ಮಂಗಳೂರಿಗೆ ಆಗಮಿಸಲಿದೆ. ಸಿಐಎಎಸ್‌ಎಫ್ ವತಿಯಿಂದ ಆಯೋಜಿಸಲಾಗಿರುವ ಈ ಐತಿಹಾಸಿಕ ಅಭಿಯಾನದಲ್ಲಿ 65 ಮಹಿಳಾ ಸೈಕ್ಲಿಸ್ಟ್‌ಗಳು ಸೇರಿದಂತೆ ಸುಮಾರು 130 ಸಿಐಎಎಫ್ ಸಿಬ್ಬಂದಿ ಭಾಗವಹಿಸುತ್ತಿದ್ದಾರೆ. ಸೈಕ್ಲೋಥಾನ್ ಇದೇ 21 ರಂದು ಕೊಚ್ಚಿಯಲ್ಲಿ ಸಮಾರೋಪಗೊಳ್ಳಲಿದ್ದು, ರಾಷ್ಟ್ರೀಯ ಏಕತೆ, ಕರಾವಳಿ ಭದ್ರತೆ ಹಾಗೂ ಕರಾವಳಿ ಪ್ರದೇಶಗಳ ಅಭಿವೃದ್ಧಿಯ ಹಿನ್ನೆಲೆಯಲ್ಲಿ ಈ ಸೈಕ್ಲೋಥಾನ್ ಹಮ್ಮಿಕೊಳ್ಳಲಾಗಿದೆ.

*******

**ಮೈಸೂರು ಜಿಲ್ಲೆಯಲ್ಲಿ ತಾಯಿ ಮಗು** ಮರಣ ಪ್ರಮಾಣವನ್ನು ಶೂನ್ಯಕ್ಕೆ ಇಳಿಸುವ ನಿಟ್ಟಿನಲ್ಲಿ ಕಾರ್ಯ ಪ್ರವೃತರಾಗುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಯುಕೇಶ್ ಕುಮಾರ್ ಸೂಚಿಸಿದ್ದಾರೆ.

*******

## ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

**ರೈತ ಸಂಘಟನೆಗಳ ಮುಖಂಡರ** ಜೊತೆ ಮುಖ್ಯಮಂತ್ರಿ ಬಜೆಟ್ ಪೂರ್ವಭಾವಿ ಸಭೆ: ಬೇಡಿಕೆಗಳ ಕುರಿತು ಸಕಾರಾತ್ಮಕ ಸ್ಪಂದನೆ.

**ಫೆಬ್ರವರಿ 28 ರಿಂದ ಮಾರ್ಚ್ 17 ರವರೆಗೆ** ದ್ವಿತೀಯ ಪಿಯುಸಿ ಪರೀಕ್ಷೆ: ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಶಾಲಾ ಶಿಕ್ಷಣ ಸಚಿವರ ಸೂಚನೆ.

**ರಾಜ್ಯದಲ್ಲಿ ಖಾಲಿ ಇರುವ** ಶಿಕ್ಷಕರ ಹುದ್ದೆ ಶೀಘ್ರ ಭರ್ತಿ ಮಾಡುವಂತೆ ಸರ್ಕಾರಕ್ಕೆ ವಿಧಾನ ಪರಿ ‍ತ್ ಸಭಾಪತಿ ಬಸವರಾಜ ಹೊರಟ್ಟಿ ಆಗ್ರಹ.

**ರಾಜ್ಯದ ಜನರ ಸ್ವಾಭಿಮಾನಿ** ಬದುಕು ಸಾಧ್ಯವಾಗಿಸಿದ ಪಂಚ ಗ್ಯಾರಂಟಿ ಯೋಜನೆಗಳು– ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ಅಭಿಮತ.

## ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**

******END******